ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 22/01/2020

# ಶಾಸಕರ ಖುದ್ದು ಹಾಜರಿಗೆ ಹೈಕೋರ್ಟ್ ಆದೇಶ

■ ವಿಕ ಸುದ್ದಿಲೋಕ ಬೆಂಗಳೂರು

ಬಿಡದಿಯ ಈಗಲ್ಟನ್ ರೆಸಾರ್ಟ್‌ನ ಹಲ್ಲೆ ಪ್ರಕರಣದಲ್ಲಿ ಪರಸ್ಪರ ರಾಜಿ ಮೂಲಕ ಇತ್ಯರ್ಥಕ್ಕೆ ಮುಂದಾಗಿರುವ ಶಾಸಕರಾದ ಆನಂದ್‌ಸಿಂಗ್ ಮತ್ತು ಜೆ.ಎನ್. ಗಣೇಶ್ ಖುದ್ದು ಹಾಜರಾಗಬೇಕು ಎಂದು ಹೈಕೋರ್ಟ್ ನಿರ್ದೇಶನ ನೀಡಿದೆ.

ಪ್ರಕರಣ ರದ್ದು ಕೋರಿ ಗಣೇಶ್ ಸಲ್ಲಿಸಿದ್ದ ಅರ್ಜಿ ನ್ಯಾ. ಬಿ.ಎ.ಪಾಟೀಲ್ ಅವರಿದ್ದ ಏಕಸದಸ್ಯಪೀಠದ ಮುಂದೆ ಮಂಗಳವಾರ ಪ್ರಕರಣ ವಿಚಾರಣೆಗೆ ಬಂದಿತು. ಆಗ ಆನಂದ್ ಸಿಂಗ್ ಪರ ವಕೀಲರು, ''ಸಿಂಗ್ ಪರವಾಗಿ ಪ್ರಮಾಣಪತ್ರ ಸಲ್ಲಿಸಿದರು. ಅಲ್ಲದೆ, ಮಾತುಕತೆ ಮೂಲಕ ಜಗಳ ಪರಿಹರಿಸಿಕೊಳ್ಳಲಾಗುವುದು. ದೂರು ಮುಂದುವರಿಸಲು ಬಯಸುವುದಿಲ್ಲ,'' ಎಂದು ತಿಳಿಸಿದ್ದಾರೆ.

ಆಗ ನ್ಯಾಯಪೀಠ, ''ದೂರುದಾರರು ಹಾಗೂ ಪ್ರತಿವಾದಿ ಇಬ್ಬರೂ ಹಾಜರಿದ್ದಾರೆಯೇ,'' ಎಂದು ಕೇಳಿತು. ಗಣೇಶ್ ಪರ ವಕೀಲರು, ''ಇಲ್ಲ, ಆದರೆ ದೂರುದಾರರೇ ಅಫಿಡವಿಟ್ ಸಲ್ಲಿಸಿದ್ದಾರೆ,'' ಎಂದರು. ಅದನ್ನು ಒಪ್ಪದ ನ್ಯಾಯಪೀಠ, ''ಅಫಿಡವಿಟ್ ಒಪ್ಪಲು ಸಾಧ್ಯವಿಲ್ಲ, ಇಬ್ಬರೂ ಖುದ್ದು ಹಾಜರಾಗಲೇಬೇಕು. ಅಫಿಡವಿಟ್‌ಗೆ ಅವರೇ ಸಹಿ ಹಾಕಿದ್ದಾರೆನ್ನುವುದಕ್ಕೆ ಖಾತ್ರಿ ಏನು,'' ಎಂದು ಪ್ರಶ್ನಿಸಿತು.